31

ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಪರಿಷತ್ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE : 05/03/2020

# 'ದೊರೆಸ್ವಾಮಿ ಗದ್ದಲ'ಕ್ಕೆ ವಿಧಾನ ಪರಿಷತ್‌ನಲ್ಲಿ ತೆರೆ

## ಶಾಸಕ ರವಿಕುಮಾರ್ ಧಿಕ್ಕಾರ ಕೂಗಿದ ಪ್ರಕರಣ ನೀತಿ ನಿರೂಪಣಾ ಸಮಿತಿಗೆ ನೀಡಲು ಕೈ ಮನವಿ

• **ಕನ್ನಡಪ್ರಭ ವಾರ್ತೆ** ವಿಧಾನ ಪರಿಷತ್

ಸ್ವಾತಂತ್ರ್ಯ ಹೋರಾಟಗಾರ ಎಚ್.ಎಸ್. ದೊರೆಸ್ವಾಮಿ ಅವರಿಗೆ ಬಿಜೆಪಿ ಸದಸ್ಯ ಎಸ್.ರವಿಕುಮಾರ್ ಅವರು ಸದನದಲ್ಲಿ ಧಿಕ್ಕಾರದ ಘೋಷಣೆ ಕೂಗಿದ ವಿಷಯವನ್ನು ನೀತಿ ನಿರೂಪಣಾ ಸಮಿತಿಗೆ ವಹಿಸುವಂತೆ ಪ್ರತಿಪಕ್ಷದ ನಾಯಕ ಎಸ್.ಆರ್. ಪಾಟೀಲ್ ಸಭಾಪತಿಗಳಿಗೆ ಮನವಿ ಮಾಡಿದರು. ಇದರೊಂದಿಗೆ ಈ ಕುರಿತು ಪ್ರತಿಪಕ್ಷ ಹಾಗೂ ಆಡಳಿತ ಪಕ್ಷದ ಸದಸ್ಯರ ನಡುವೆ ನಡೆದಿದ್ದ ತೀವ್ರ ವಾಕ್ಸಮರಕ್ಕೆ ಕೊನೆ ಬಿತ್ತು.



ದೊರೆಸ್ವಾಮಿ ಕುರಿತು ತಾವು ನೀಡಿರುವ ಹೇಳಿಕೆಗೆ ರವಿಕುಮಾರ್ ದೀರ್ಘವಾಗಿ ಸ್ಪಷ್ಟನೆ ನೀಡುತ್ತಿರುವಾಗ ಪ್ರತಿಪಕ್ಷದ ನಾಯಕ ಎಸ್.ಆರ್. ಪಾಟೀಲ್ ಅವರು, ರವಿಕುಮಾರ್ ಅವರಿಗೆ ಘಟನೆ ಬಗ್ಗೆ ವಿಷಾದ ವ್ಯಕ್ತಪಡಿಸುವ ಮನಸ್ಥಿತಿ ಇಲ್ಲ ಎಂದು ಕಾಣುತ್ತದೆ. ಹಾಗಾಗಿ ಸದನದ ನಿಯಮಾವಳಿ ಪ್ರಕಾರ ಈ ವಿಷಯವನ್ನು ನೀತಿ ನಿರೂಪಣಾ ಸಮಿತಿಗೆ ವಹಿಸಬೇಕು ಎಂದು ಸಭಾಪತಿಗಳಿಗೆ ಅರ್ಜಿ ಸಲ್ಲಿಸಿದರು. ಸಭಾಪತಿ ಪ್ರತಾಪಚಂದ್ರ ಶೆಟ್ಟಿ ಅವರು ಸಹ ಸ್ಪಷ್ಟನೆ ನೀಡುತ್ತಿದ್ದ ರವಿಕುಮಾರ್ ಅವರಿಗೆ ನೀವು ಹೇಳಿದ ಯಾವುದೇ ಮಾತು ಕಡತಕ್ಕೆ ಹೋಗುವುದಿಲ್ಲ ಎಂದು ಆದೇಶಿಸಿ, ಪ್ರತಿಪಕ್ಷದ ನಾಯಕರು ಸಲ್ಲಿಸಿರುವ ಅರ್ಜಿ ಪರಿಶೀಲಿಸಿ ತೀರ್ಮಾನ ಪ್ರಕಟಿಸುವುದಾಗಿ ತಿಳಿಸಿದರು.

**ರವಿಕುಮಾರ್ ಸುದೀರ್ಘ ಸ್ಪಷ್ಟನೆ:** ಇದಕ್ಕೂ ಮುನ್ನ ಬೆಳಗ್ಗೆ ಕಲಾಪ ಆರಂಭವಾಗುತ್ತಿದ್ದಂತೆ ಪ್ರತಿಪಕ್ಷಗಳ ಸದಸ್ಯರು, ದೊರೆಸ್ವಾಮಿ ಅವರಿಗೆ ಧಿಕ್ಕಾರ ಎಂದು ಘೋಷಣೆ ಕೂಗಿದ ರವಿಕುಮಾರ್ ವಿಷಾದ ವ್ಯಕ್ತಪಡಿಸಬೇಕು ಎಂದು ಆಗ್ರಹಿಸಿ ಧರಣಿ ಆರಂಭಿಸಿದರು. ಆಗ ಜೆಡಿಎಸ್ ಸದಸ್ಯ ಬಸವರಾಜ ಹೊರಟ್ಟಿ, ಕಲಾಪ ನಡೆಯಬೇಕು ಎಂಬುದು ತಮ್ಮ ಉದ್ದೇಶ. ಅದಕ್ಕಾಗಿ ರವಿಕುಮಾರ್ ಅವರು ಘೋಷಣೆ ಕೂಗಿದ ಬಗ್ಗೆ ವಿಷಾದ ವ್ಯಕ್ತಪಡಿಸಬೇಕು. ಇಲ್ಲದಿದ್ದರೆ ಅಧಿವೇಶನದಲ್ಲಿ ಭಾಗಿಯಾಗುವುದಿಲ್ಲ ಎಂದರು. ಇದಕ್ಕೆ ಸಭಾನಾಯಕ ಕೋಟ ಶ್ರೀನಿವಾಸ ಪೂಜಾರಿ, ರವಿಕುಮಾರ್ ಅವರಿಗೆ ಸ್ಪಷ್ಟೀಕರಣ ನೀಡಲು ಅವಕಾಶ ನೀಡಬೇಕು ಎಂದು ಮನವಿ ಮಾಡಿದರು. ಆದರೆ ಪ್ರತಿಪಕ್ಷದ ಕೆಲ ಸದಸ್ಯರು ಸ್ಪಷ್ಟನೆ ಬೇಡ, ವಿಷಾದ ವ್ಯಕ್ತಪಡಿಸಲಿ ಎನ್ನತೊಡಗಿದರು. ಈ ಹಂತದಲ್ಲಿ ಭಾರೀ ಚರ್ಚೆಗೆ ಕಾರಣವಾಯಿತು.